# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 08.07.2010**

## ***ಪಾಲಿಕೆಯ ಸ.ಕಾ.ನಿ.ಅ-ಗೋವಿಂದರಾಜನಗರ ಉಪ ವಿಭಾಗ ಕಛೇರಿ ಸ್ಥಳಾಂತರ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಗೋವಿಂದರಾಜನಗರ) ಉಪ ವಿಭಾಗ ಕಛೇರಿಯು 4ನೇ ಅಡ್ಡರಸ್ತೆ, ಮಾಗಡಿ ರಸ್ತೆ, ಬೆಂಗಳೂರು-23 ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈಗ ಈ ಕಛೇರಿಯನ್ನು ಶಾಸಕರ ಭವನ, ಎಂ.ಸಿ. ಬಡಾವಣೆ, ವಿಜಯನಗರ, ಬೆಂಗಳೂರು ಇಲ್ಲಿಗೆ ಸ್ಥಳಾಂತರಿಸಲಾಗಿದೆ. ಸದರಿ ಕಛೇರಿಯು ದಿನಾಂಕ: 07.07.2010 ರಿಂದ ಕಾರ್ಯನಿರ್ವಹಿಸುತ್ತಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಗೋವಿಂದರಾಜನಗರ) ಉಪ ವಿಭಾಗ ರವರು ತಿಳಿಸಿರುತ್ತಾರೆ. ಸಂಬಂಧಪಟ್ಟ ಸಾರ್ವಜನಿಕರು ಇನ್ನು ಮುಂದೆ ಸ್ಥಳಾಂತರಗೊಂಡಿರುವ ಕಛೇರಿಯನ್ನು ತಮ್ಮ ಕೆಲಸ ಕಾರ್ಯಗಳಿಗೆ ಸಂಪರ್ಕಿಸಲು ಕೋರಿದೆ.

## ***ಮಡಿವಾಳ ಹಾಗೂ ಬಿ.ಟಿ.ಎಂ. ಬಡಾವಣೆ ವಾರ್ಡ್ ಕಛೇರಿಗಳ ಸ್ಥಳಾಂತರ***

ಬಿ.ಟಿ.ಎಂ. ಲೇಔಟ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸದಾಗಿ ವಿಂಗಡಣೆಯಾಗಿ ಪ್ರಾರಂಭವಾಗಿರುವ ವಾರ್ಡ್ ನಂ.172 (ಮಡಿವಾಳ)ರ ವಾರ್ಡ್ ಕಛೇರಿಯು ಹೊಸೂರು ಮುಖ್ಯರಸ್ತೆ, ಮಡಿವಾಳ, ಪಾಲಿಕೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈಗ ಈ ವಾರ್ಡ್ ಕಛೇರಿಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಟ್ಟಡ, 16ನೇ ಮುಖ್ಯರಸ್ತೆ (ಉದ್ಯಾನವನದ ಪಕ್ಕದಲ್ಲಿ), ಬಿ.ಟಿ.ಎಂ. 1ನೇ ಹಂತ, ಬೆಂಗಳೂರು-68 ಇಲ್ಲಿಗೆ ಸ್ಥಳಾಂತರಿಸಲಾಗಿದೆ.

ಅದೇ ರೀತಿ ಬಿ.ಟಿ.ಎಂ. ಲೇಔಟ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸದಾಗಿ ವಿಂಗಡಣೆಯಾಗಿ ಪ್ರಾರಂಭವಾಗಿರುವ ವಾರ್ಡ್ ನಂ.176 (ಬಿ.ಟಿ.ಎಂ. ಬಡಾವಣೆ)ರ ವಾರ್ಡ್ ಕಛೇರಿಯು 15ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆ, ಕುವೆಂಪು ಉದ್ಯಾನವನದಲ್ಲಿ ಪಾಲಿಕೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈಗ ಈ ವಾರ್ಡ್ ಕಛೇರಿಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಟ್ಟಡ, 16ನೇ ಮುಖ್ಯರಸ್ತೆ, 6ನೇ ಅಡ್ಡರಸ್ತೆ, ಬಿ.ಟಿ.ಎಂ. 2ನೇ ಹಂತ, ಬೆಂಗಳೂರು-76 ಇಲ್ಲಿಗೆ ಸ್ಥಳಾಂತರಿಸಲಾಗಿದೆ.

ಮೇಲ್ಕಂಡ ಎರಡೂ ವಾರ್ಡ್ ಕಛೇರಿಗಳು ದಿನಾಂಕ: 09.07.2010 ರಿಂದ ಪ್ರತಿದಿನ ಬೆಳಿಗ್ಗೆ 8.00 ರಿಂದ ವಾರ್ಡ್ ಕಛೇರಿಗಳ ಕೆಲಸ ಕಾರ್ಯಗಳನ್ನು ಪ್ರಾರಂಭಿಸಲಾಗುವುದು ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ. ಲೇಔಟ್ ಉಪ ವಿಭಾಗ ರವರು ತಿಳಿಸಿರುತ್ತಾರೆ. ಸಂಬಂಧಪಟ್ಟ ಸಾರ್ವಜನಿಕರು ಇನ್ನು ಮುಂದೆ ಸ್ಥಳಾಂತರಗೊಂಡಿರುವ ವಾರ್ಡ್ ಕಛೇರಿಯನ್ನು ತಮ್ಮ ಕೆಲಸ ಕಾರ್ಯಗಳಿಗೆ ಸಂಪರ್ಕಿಸಲು ಕೋರಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 08.07.2010**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದ 415 ಆಸ್ತಿಗಳನ್ನು ವಿವಿಧ ಅವಧಿಗಳಿಗೆ ಗುತ್ತಿಗೆ ಆಧಾರದ ಮೇಲೆ ವಿವಿಧ ಉದ್ದೇಶಗಳಿಗೆ ನೀಡಲಾಗಿರುತ್ತದೆ. ಇದರ ಪೈಕಿ 170 ಗುತ್ತಿಗೆ ಕರಾರು ಚಾಲ್ತಿಯಲ್ಲಿದ್ದು, 245 ಪ್ರಕರಣಗಳಲ್ಲಿ ಗುತ್ತಿಗೆ ಅವಧಿ ಮೀರಿರುತ್ತದೆ. ಈ ಪ್ರಕರಣಗಳಲ್ಲಿ ಅನಧಿಕೃತವಾಗಿ ಮುಂದುವರೆದಿರುವ ಕರಾರುದಾರರನ್ನು ತೆರವುಗೊಳಿಸಲು ಕರ್ನಾಟಕ ಪಬ್ಲಿಕ್ ಪ್ರಿಮಿಸಿಸ್ ಕಾಯ್ದೆಯಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಪಾಲಿಕೆಯ ಸ್ವತ್ತನ್ನು ಸುಪರ್ದಿಗೆ ಪಡೆಯಲು ಕಾಲಕಾಲಕ್ಕೆ ನಿರ್ದೇಶನಗಳನ್ನು ಆಯಾ ವಲಯದ ಜಂಟಿ ಆಯುಕ್ತರುಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. ಇದರನ್ವಯ ಅನೇಕ ಪ್ರಕರಣಗಳಲ್ಲಿ ಅನಧಿಕೃತದಾರರಿಗೆ ನೋಟಿಸನ್ನು ನೀಡಿರುತ್ತಾರೆ.

ಪಾಲಿಕೆ ಸ್ವತ್ತನ್ನು ಸಂರಕ್ಷಿಸುವ ಉದ್ದೇಶದಿಂದ ಈ ಕಾರ್ಯ ಚುರುಕುಗೊಳಿಸಲು ಆಯಾ ವಲಯದ ಜಂಟಿ ಆಯುಕ್ತರು ಹಾಗೂ ಉಪ ಆಯುಕ್ತರುಗಳಿಗೆ ಕಟ್ಟುನಿಟ್ಟಿನ ಕ್ರಮ ಕೈಗೊಂಡು ಎಲ್ಲಾ ಪ್ರಕರಣಗಳಲ್ಲಿ ಕಾನೂನಿನನ್ವಯ ಆಸ್ತಿಗಳನ್ನು ಸುಪರ್ದು ಪಡೆಯಲು ಹಾಗೂ ದಿನಾಂಕ: 17.07.2010ರ ಒಳಗೆ ಪಾಲನಾ ವರದಿಯನ್ನು ಚಾಚು ತಪ್ಪದೆ ಸಲ್ಲಿಸಲು ನಿರ್ದೇಶಿಸಲಾಗಿದೆ. ಪಾಲಿಕೆಯು ಎಲ್ಲಾ ಅನಧಿಕೃತದಾರರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದು ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** ದಿನಾಂಕ: 08.07.2010

## ಪಾಲಿಕೆ ಶಾಲೆ ಹಾಗೂ ಆಸ್ಪತ್ರೆಗಳಿಗೆ ಉಪ ಮಹಾಪೌರರ ದಿಢೀರ್ ಭೇಟಿ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಉಪ ಮಹಾಪೌರರಾದ ಶ್ರೀ ಎನ್. ದಯಾನಂದ್ ರವರು ಇಂದು ಶಿವಾಜಿನಗರ ವ್ಯಾಪ್ತಿಯಲ್ಲಿ ಬರುವ ಪಾಲಿಕೆಯ ಪದವಿ ಪೂರ್ವ ಕಾಲೇಜು, ಡಿಸ್ಪೆನ್ಸರಿ ರಸ್ತೆ ಹಾಗೂ ಬ್ರಾಡ್‌ವೇ ರಸ್ತೆಯ ಟಿ.ಬಿ. ಯೂನಿಟ್ ಮತ್ತು ಬಿಬಿಎಂಪಿ ಯುನಾನಿ ಕೇಂದ್ರಕ್ಕೆ ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀಮತಿ ಫರೀದಾ ಇಸ್ತಾಕ್ ರವರೊಂದಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಡಿಸ್ಪೆನ್ಸರಿ ರಸ್ತೆಯಲ್ಲಿರುವ ಪಾಲಿಕೆಯ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರ ಕೊಠಡಿಯಲ್ಲಿ ಸಿಬ್ಬಂದಿಗಳ ಹಾಜರಾತಿ ಹಾಗೂ ವಿದ್ಯಾರ್ಥಿಗಳ ವಾರ್ಷಿಕ ಶೇಕಡಾವಾರು ಅಂಕಪಟ್ಟಿಗಳ ವಿವರವನ್ನು ಪರಿಶೀಲಿಸಿ, 2009-10ನೇ ಸಾಲಿನಲ್ಲಿ ಕೇವಲ ಶೇಕಡ 64.12 ರಷ್ಟು ಬಂದಿರುವುದನ್ನು ಗಮನಿಸಿ, ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ರೀತಿಯಲ್ಲಿ ಫಲಿತಾಂಶ ಬರುವಂತೆ ಕ್ರಮಕೈಗೊಳ್ಳಲು ಸಿಬ್ಬಂದಿ ವರ್ಗದವರಿಗೆ ಸೂಚಿಸಿದರು.

ನಂತರ ಶಾಲಾ ಕೊಠಡಿಗಳಿಗೆ ಭೇಟಿ ನೀಡಿ, ವಿದ್ಯಾರ್ಥಿಗಳಿಗೆ ಪಾಠ ಪ್ರವಚನಗಳು ಅರ್ಥವಾಗುವ ರೀತಿಯಲ್ಲಿ ಸರಳವಾಗಿ ಬೋಧಿಸಲು ಸೂಚಿಸುತ್ತಾ, ವಿದ್ಯಾರ್ಥಿಗಳ ಅನಿಸಿಕೆಗಳನ್ನು ಪಡೆದು, ಉತ್ತಮ ರೀತಿಯಲ್ಲಿ ಅಭ್ಯಾಸ ಮಾಡಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆಯಲು ತಿಳಿಸಿದರು.

ವಸಂತನಗರದಲ್ಲಿರುವ ಬಿಬಿಎಂಪಿ ಯುನಾನಿ ಕೇಂದ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಆಸ್ಪತ್ರೆಯ ಶೌಚಾಲಯಗಳಲ್ಲಿ ಸ್ವಚ್ಛತೆ ಕಾಪಾಡದೇ ಇರುವುದರಿಂದ ಸಾರ್ವಜನಿಕರಿಗೆ ರೋಗಗಳು ಹರಡುವ ಸಾಧ್ಯತೆ ಇರುವುದರಿಂದ ಆಸ್ಪತ್ರೆಯ ಆವರಣವನ್ನು ಮತ್ತು ಕೊಠಡಿ ಹಾಗೂ ಶೌಚಾಲಯಗಳಲ್ಲಿ ಸ್ವಚ್ಛತೆ ಕಾಪಾಡಲು ಸಂಬಂಧಪಟ್ಟ ವೈದ್ಯರಿಗೆ ಹಾಗೂ ಆರೋಗ್ಯ ವೈದ್ಯಾಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ಕಟ್ಟುನಿಟ್ಟಿನ ಆದೇಶ ನೀಡಿದರು.

ಶಿವಾಜಿನಗರ ಪ್ರದೇಶದಲ್ಲಿರುವ ನ್ಯೂ ಹಿಲಾಲ್ ರೆಸ್ಟೋರೆಂಟ್ ಪರಿಶೀಲಿಸಿ, ಅಡುಗೆ ಮನೆಯಲ್ಲಿ ಯಾವುದೇ ರೀತಿಯ ಸ್ವಚ್ಛತೆ ಇಲ್ಲದಿರುವುದು, ಕಸ ಕಡ್ಡಿಗಳು ಹಾಗೂ ಕೊಳಚೆಯಿಂದ ಕೂಡಿದ್ದು, ಕಲುಷಿತ ಕುಡಿಯುವ ನೀರು ಈ ರೀತಿಯಾಗಿ ರೆಸ್ಟೋರೆಂಟ್‌ನಲ್ಲಿ ಸುಚಿತ್ವವನ್ನು ಕಾಪಾಡದಿದ್ದ ಕಾರಣ ಸ್ಥಳದಲ್ಲೇ ಹಾಜರಿದ್ದ ಆರೋಗ್ಯ ವೈದ್ಯಾಧಿಕಾರಿಗಳಿಗೆ ತಕ್ಷಣವೇ ಸದರಿ ರೆಸ್ಟೋರೆಂಟ್‌ಗೆ ನೋಟೀಸ್ ಜಾರಿ ಮಾಡುವಂತೆ ಕ್ರಮ ಜರುಗಿಸಲು ಆದೇಶಿಸಿದರು.

ಈ ಸಂದರ್ಭದಲ್ಲಿ ಸ್ಥಳೀಯ ನಗರ ಪಾಲಿಕೆ ಸದಸ್ಯರಾದ ಶ್ರೀಮತಿ ಫರೀದಾ ಇಸ್ತಾಕ್, ಉಪ ಆಯುಕ್ತರು (ಪೂರ್ವ) ವಲಯ, ಆರೋಗ್ಯಾಧಿಕಾರಿಗಳು, ಶಿಕ್ಷಣಾಧಿಕಾರಿಗಳು ಹಾಗೂ ಮುಂತಾದವರು ಉಪಸ್ಥಿತರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**